**All India Radio: Bangalore**
**National Bulletin In Kannada**
**06.03.2025 13.10 p.m.**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

1. ಪ್ರಧಾನಿ ನರೇಂದ್ರ ಮೋದಿ ಉತ್ತರಾಖಂಡಕ್ಕೆ ಭೇಟಿ ಮುಖ್ವಾದಲ್ಲಿ ಗಂಗಾಮಾತೆಗೆ ಪೂಜೆ : ಪಾದಯಾತ್ರೆ ಮತ್ತು ಬೈಕ್ ರ‍್ಯಾಲಿಗೆ ಚಾಲನೆ
2. ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ಮುಂಬೈನಲ್ಲಿಂದು ದಿಯೋರಾ ಸ್ಮಾರಕ ಸಂವಾದ ಕಾರ್ಯಕ್ರಮದಲ್ಲಿ ಭಾಗಿ
3. ಅಮೆರಿಕದ ಬದಲಾದ ವಿದೇಶಾಂಗ ನೀತಿ, ಭಾರತಕ್ಕೆ ಹೊಂದಿಕೆ - ಡಾ. ಎಸ್. ಜೈಶಂಕರ್
4. ಇದೇ ೨೦ ರಿಂದ ೨೭ರವರೆಗೆ ದೆಹಲಿಯಲ್ಲಿ ಖೇಲೋ ಇಂಡಿಯಾ ಪ್ಯಾರಾ ಕ್ರೀಡಾಕೂಟ : ೧ ಸಾವಿರದ ೨೩೦ಕ್ಕೂ ಅಧಿಕ ಅಥ್ಲಿಟ್‌ಗಳು ಭಾಗಿ
5. ಐಎಸ್‌ಎಲ್ ಫುಟ್ಬಾಲ್ ಟೂರ್ನಿ : ಇಂದು ಸಂಜೆ ಹೈದರಾಬಾದ್ ಹಾಗೂ ಪಂಜಾಬ್ ತಂಡಗಳ ಮುಖಾಮುಖಿ

<><><><>

ಪ್ರಧಾನಿ ನರೇಂದ್ರ ಮೋದಿ ಇಂದು ಉತ್ತರಾಖಂಡಕ್ಕೆ ಭೇಟಿ ನೀಡಿದ್ದಾರೆ. ಮುಖ್ವಾದಲ್ಲಿರುವ ಗಂಗಾ ಮಾತೆಗೆ ವಿಶೇಷ ಪೂಜೆ ಸಲ್ಲಿಸಿದ ಅವರು, ನಂತರ ಆರತಿ ಮಾಡಿ ದರ್ಶನ ಪಡೆದರು. ಇದೇ ವೇಳೆ ಪ್ರಧಾನಮಂತ್ರಿ ಅವರು, ಸ್ಥಳೀಯ ಜಾನಪದ ಕಲಾತಂಡದ ಜೊತೆ ನೃತ್ಯಕ್ಕೆ ಹೆಜ್ಜೆಹಾಕಿದರು. ಅಲ್ಲದೇ ಪ್ರಧಾನಿಯವರು ಮುಖ್ವಾದಿಂದ ನೈಸರ್ಗಿಕ ಸೌಂದರ್ಯವನ್ನು ವೀಕ್ಷಿಸಿ ಆಸ್ವಾದಿಸಿದರು. ನಂತರ ಅವರು, ಹರ್ಸಿಲ್‌ನಲ್ಲಿ ಪಾದಯಾತ್ರೆ ಮತ್ತು ಬೈಕ್ ರ‍್ಯಾಲಿಗೆ ಚಾಲನೆ ನೀಡಿದರು. ಬಳಿಕ ಅವರು, ಉತ್ತರಾಖಂಡ್ ಚಳಿಗಾಲ ಪ್ರವಾಸೋದ್ಯಮ ವಸ್ತು ಪ್ರದರ್ಶನಕ್ಕೆ ಭೇಟಿ ನೀಡಿ, ಸ್ಥಳೀಯ ಕರಕುಶಲ ಕರ್ಮಿಗಳು ಸಿದ್ದಪಡಿಸಿರುವ ಬಗೆ ಬಗೆ ಉತ್ಪನ್ನಗಳನ್ನು ವೀಕ್ಷಿಸಿದರು. ಕರಕುಶಲ ಕರ್ಮಿಗಳೊಂದಿಗೆ ಸಂವಾದ ನಡೆಸಿ ಸಾರ್ವಜನಿಕ ಸಭೆಯನ್ನುದ್ದೇಶಿಸಿ ಮಾತನಾಡಿದರು. ಉತ್ತರಾಖಂಡ್ ಸರ್ಕಾರದ ದೂರದೃಷ್ಟಿಯ ಯೋಜನೆಗಳಿಂದಾಗಿ ಜನತೆ ದೈವಿಕ ಸ್ಥಳಗಳಿಗೆ ಹೆಚ್ಚಿನ ಭೇಟಿ ನೀಡಲು ಸಾಧ್ಯವಾಗುತ್ತಿದೆ. ಇದರಿಂದಾಗಿ ಹೆಚ್ಚಿನ ಉದ್ಯೋಗವಕಾಶಗಳು ಸೃಷ್ಟಿಯಾಗುತ್ತಿದ್ದು, ಉತ್ತರಾಖಂಡದ ಜನತೆ ಮತ್ತು ಯುವಜನತೆಗೆ ಹೆಚ್ಚಿನ ಅವಕಾಶಗಳು ಸೃಷ್ಟಿಯಾಗುತ್ತಿದೆ. ನಮ್ಮ ಡಬಲ್ ಇಂಜಿನ್ ಸರ್ಕಾರ ಉತ್ತರಾಖಂಡವನ್ನು ಅಭಿವೃದ್ಧಿ ರಾಜ್ಯವನ್ನಾಗಿ ಮಾಡಲು ಶ್ರಮಿಸುತ್ತಿದೆ ಎಂದು ಹೇಳಿದರು. ಅಲ್ಲದೇ ಚಾರ್‌ಧಾಮ್ ಸರ್ವಋತು ರಸ್ತೆ, ಆಧುನಿಕ ಎಕ್ಸ್‌ಪ್ರೆಸ್, ರೈಲ್ವೆ, ವಿಮಾನ ಮತ್ತು ಹೆಲಿಕಾಪ್ಟರ್ ಸೇವೆಗಳನ್ನು ಕಳೆದ ೧೦ ವರ್ಷಗಳಲ್ಲಿ ವ್ಯಾಪಕವಾಗಿ ವಿಸ್ತರಿಸುವುದು ಪ್ರವಾಸೋದ್ಯಮ ಅಭಿವೃದ್ಧಿಗೆ ಹೆಚ್ಚಿನ ಪುಷ್ಟಿ ನೀಡಿದೆ ಎಂದು ಪ್ರಧಾನಮಂತ್ರಿ ಹೇಳಿದರು. ಚಳಿಗಾಲ ಪ್ರವಾಸೋದ್ಯಮ ಈ ಋತುವಿನಲ್ಲಿ ಪ್ರವಾಸಿಗರು ಚಾರಣ, ಸ್ಕೈಯಿಂಗ್ ಮತ್ತಿತರ ಚಟುವಟಿಕೆಗಳಲ್ಲಿ ತೊಡಗಿಕೊಂಡು ಪ್ರಕೃತಿಯನ್ನು ಆನಂದಿಸಬಹುದಾಗಿದೆ. ಪ್ರವಾಸೋದ್ಯಮಕ್ಕೆ ಮತ್ತಷ್ಟು ಉತ್ತೇಜನ ನೀಡಲು ನಿನ್ನೆಯಷ್ಟೇ ಕೇಂದ್ರ ಸಂಪುಟ ಕೇದಾರನಾಥ ಮತ್ತು ಹೇಮ್‌ಕುಂಡ್ ರೋಪ್‌ವೇ ಯೋಜನೆಗಳಿಗೆ ಅನುಮೋದನೆ ನೀಡಿದೆ. ಇದರಿಂದ ೮ ರಿಂದ ೯ ಗಂಟೆ ಹಿಡಿಯುತ್ತಿದ್ದ ಪ್ರಯಾಣದ ಅವಧಿ ಕೇವಲ ೩೦ ನಿಮಿಷಕ್ಕೆ ಇಳಿಕೆಯಾಗಲಿದೆ. ಇದು ವೃದ್ಧರು ಹಾಗೂ ಮಕ್ಕಳಿಗೂ ಅನುಕೂಲವಾಗಲಿದೆ ಎಂದು ಹೇಳಿದರು.

<><><><>

ಸೋನ್ ಪ್ರಯಾಗದಿಂದ ಕೇದಾರನಾಥ್‌ವರೆಗೆ ೧೨.೯ ಕಿಲೋಮೀಟರ್ ಉದ್ದದ ರೋಪ್‌ವೇ ಅಭಿವೃದ್ಧಿಗೆ ಕೇಂದ್ರ ಸರ್ಕಾರ ಅನುಮೋದನೆ ನೀಡಿದೆ. ಈ ಕುರಿತು ದೆಹಲಿಯಲ್ಲಿ ಮಾಹಿತಿ ನೀಡಿದ ಕೇಂದ್ರ ವಾರ್ತಾ ಮತ್ತು ಪ್ರಸಾರ ಸಚಿವ ಅಶ್ವಿನಿ ವೈಷ್ಣವ್ ಒಟ್ಟು ೪ ಸಾವಿರ ಕೋಟಿ ರೂಪಾಯಿ ವೆಚ್ಚದಲ್ಲಿ ಈ ಯೋಜನೆಯನ್ನು ಕೈಗೆತ್ತಿಕೊಳ್ಳಲಾಗುತ್ತಿದೆ ಎಂದರು. ಅದೇ ರೀತಿ ೨ ಸಾವಿರದ ೭೩೦ ಕೋಟಿ ರೂಪಾಯಿ ವೆಚ್ಚದಲ್ಲಿ ೧೨.೪

ಕಿಲೋಮೀಟರ್ ಉದ್ದದ ಹೇಮ್‌ಕುಂಡ್ ಸಾಹೀಬ್ ರೋಪ್‌ವೇ ಅನ್ನು ಅಭಿವೃದ್ಧಿಪಡಿಸಲಾಗುವುದು ಎಂದು ಅವರು ಹೇಳಿದರು.

<><><><>

ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ಇಂದು ಮಹಾರಾಷ್ಟ್ರದ ಮುಂಬೈಗೆ ಒಂದು ದಿನದ ಭೇಟಿ ಕೈಗೊಳ್ಳಲಿದ್ದಾರೆ. ಈ ವೇಳೆ ಅವರು, ರಾಯಲ್ ಒಪೆರಾ ಹೌಸ್‌ನಲ್ಲಿ ನಡೆಯಲಿರುವ ಮುರಳಿ ದಿಯೋರಾ ಸ್ಮಾರಕ ಸಂವಾದ ಕಾರ್ಯಕ್ರಮದ ಉದ್ಘಾಟನಾ ಸಮಾರಂಭದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಲಿದ್ದಾರೆ.

<><><><>

ಅಧ್ಯಕ್ಷ ಡೊನಾಲ್ಡ್ ಟ್ರಂಪ್ ನೇತೃತ್ವದ ಅಮೆರಿಕದ ಆಡಳಿತವು ಭಾರತದ ಹಿತಾಸಕ್ತಿಗಳಿಗೆ ಹೊಂದುವಂತಹ ಬಹುಧ್ರುವೀಯತೆಯತ್ತ ಸಾಗುತ್ತಿದೆ ಎಂದು ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಹೇಳಿದ್ದಾರೆ. ಅಧ್ಯಕ್ಷ ಟ್ರಂಪ್ ನೇತೃತ್ವದಲ್ಲಿ ಅಮೆರಿಕದ ವಿದೇಶಾಂಗ ನೀತಿ ಬದಲಾವಣೆಯನ್ನು ನಿರೀಕ್ಷಿಸಲಾಗಿತ್ತು ಮತ್ತು ಅದು ಭಾರತಕ್ಕೆ ಹಲವು ವಿಧಗಳಲ್ಲಿ ಸರಿಹೊಂದುತ್ತದೆ ಎಂದರು. ಲಂಡನ್‌ನ ಚಾಥಮ್ ಹೌಸ್ ಚಿಂತಕರ ಚಾವಡಿಯಲ್ಲಿ 'ವಿಶ್ವದಲ್ಲಿ ಭಾರತದ ಏರಿಕೆ ಮತ್ತು ಪಾತ್ರ' ಎಂಬ ಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದ ಅವರು, ಬದಲಾಗುತ್ತಿರುವ ಭೌಗೋಳಿಕ ರಾಜಕೀಯ ಪರಿಸ್ಥಿತಿಗಳಿಂದಾಗಿ ಇಂಧನ, ತಂತ್ರಜ್ಞಾನ ಮತ್ತು ಸಂಪರ್ಕ ವಲಯಗಳಲ್ಲಿ ಬೆಳವಣಿಗೆಗಳಾಗುತ್ತಿವೆ. ಅಮೆರಿಕದ ಅಧ್ಯಕ್ಷರು ಮತ್ತು ಅವರ ಆಡಳಿತದ ಹಲವಾರು ಆದ್ಯತೆಗಳು ಭಾರತಕ್ಕೆ ಭರವಸೆ ನೀಡುತ್ತಿವೆ ಎಂದು ತಿಳಿಸಿದ್ದಾರೆ. ಸುಂಕಗಳ ವಿಷಯದ ಕುರಿತು, ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಪ್ರಸ್ತುತ ದ್ವಿಪಕ್ಷೀಯ ವ್ಯಾಪಾರ ಒಪ್ಪಂದದ ಕುರಿತು ಚರ್ಚಿಸಲು ವಾಷಿಂಗ್ಟನ್‌ನಲ್ಲಿದ್ದಾರೆ ಎಂದರು.

<><><><>

ಭಾರತದ ಸಾಮಾಜಿಕ ಭದ್ರತಾ ವ್ಯಾಪ್ತಿ ದ್ವಿಗುಣಗೊಂಡು ಶೇಕಡ ೨೪.೪ ರಿಂದ ಶೇಕಡ ೪೮.೮ ಕ್ಕೆ ಹೆಚ್ಚಳವಾಗಿದೆ ಎಂದು ಕೇಂದ್ರ ಕಾರ್ಮಿಕ ಮತ್ತು ಉದ್ಯೋಗ ಸಚಿವ ಡಾ. ಮನ್ಸುಖ್ ಮಾಂಡವಿಯ ಹೇಳಿದ್ದಾರೆ. ಜನರಲ್ಲಿ ಹೂಡಿಕೆ' ಎಂಬ ವಿಷಯದ ಕುರಿತು ಬಜೆಟ್ ನಂತರದ ವೆಬಿನಾರ್ ಉದ್ದೇಶಿಸಿ ಮಾತನಾಡಿದ ಸಚಿವರು, ಒಂದು ರಾಷ್ಟ್ರದ ದೊಡ್ಡ ಆಸ್ತಿ ಅದರ ಜನರು ಎಂದು ಒತ್ತಿ ಹೇಳಿದರು. ಹತ್ತು ಹೊಸ ನೌಕರರ ರಾಜ್ಯ ವಿಮಾ ನಿಗಮ-ಇಎಸ್‌ಐಸಿ ವೈದ್ಯಕೀಯ ಕಾಲೇಜುಗಳನ್ನು ಅನುಮೋದಿಸಲಾಗಿದೆ, ಇನ್ನೂ ೧೦ ಕಾಲೇಜುಗಳನ್ನು ಆರಂಭಿಸುವ ಯೋಜನೆಗಳಿವೆ ಎಂದು ಅವರು ಹೇಳಿದರು.

<><><><>

ಕೇಂದ್ರ ಸಂಸದೀಯ ವ್ಯವಹಾರಗಳು ಮತ್ತು ಅಲ್ಪ ಸಂಖ್ಯಾತ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಇಂದು ಕೇರಳಕ್ಕೆ ಭೇಟಿ ನೀಡಲಿದ್ದಾರೆ. ಅವರು, ತಿರುವನಂತಪುರಂನಲ್ಲಿ ನಡೆಯಲಿರುವ ದಕ್ಷಿಣದ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳ ಪ್ರಧಾನಮಂತ್ರಿ ಜನವಿಕಾಸ ಕಾರ್ಯಕ್ರಮದ ಪ್ರತಿನಿಧಿಗಳ ತರಬೇತಿ ಕಾರ್ಯಾಗಾರದಲ್ಲಿ ಭಾಗವಹಿಸಲಿದ್ದಾರೆ.

<><><><>

ತೆಲಂಗಾಣ ರಾಜ್ಯದಲ್ಲಿ ಇತ್ತೀಚೆಗೆ ನಡೆದ ವಿಧಾನಪರಿಷತ್ ಚುನಾವಣೆಯಲ್ಲಿ ಬಿಜೆಪಿಗೆ ಹೆಚ್ಚಿನ ಬೆಂಬಲ ವ್ಯಕ್ತವಾಗಿರುವುದಕ್ಕೆ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು, ತೆಲಂಗಾಣದ ಜನತೆಗೆ ಧನ್ಯವಾದಗಳನ್ನು ಸಲ್ಲಿಸಿದ್ದಾರೆ. ಅವರು, ತಮ್ಮ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಬದ್ಧತೆಯೊಂದಿಗೆ ಪಕ್ಷದ ಕಾರ್ಯಕರ್ತರು ಜನಸಾಮಾನ್ಯರ ಜೊತೆಗೂಡಿ ಕಾರ್ಯನಿರ್ವಹಿಸುತ್ತಿರುದನ್ನು ಶ್ಲಾಘಿಸಿದ್ದಾರೆ.

<><><><>

ಗಾಜಾ ಪಟ್ಟಿಯಲ್ಲಿ ಒತ್ತೆಯಾಳುಗಳನ್ನಾಗಿ ಇರಿಸಿಕೊಂಡವರನ್ನು ಕೂಡಲೇ ಬಿಡುಗಡೆ ಮಾಡುವಂತೆ ಅಮೆರಿಕದ ಅಧ್ಯಕ್ಷ ಡೋನಾಲ್ಡ್ ಟ್ರಂಪ್ ಹಮಾಸ್ ಉಗ್ರರಿಗೆ ಕಠಿಣ ಎಚ್ಚರಿಕೆ ನೀಡಿದ್ದಾರೆ. ಹಮಾಸ್ ಉಗ್ರರನ್ನು ನಿರ್ಮೂಲನೆ

ಮಾಡಲು ಇಸ್ರೇಲ್‌ಗೆ ಎಲ್ಲ ರೀತಿಯ ನೆರವು ನೀಡುವುದಾಗಿ ಅಮೆರಿಕ ಭರವಸೆ ನೀಡಿದ ಬೆನ್ನಲ್ಲೆ ಶ್ವೇತಭವನದಿಂದ ಉಗ್ರರಿಗೆ ಈ ಎಚ್ಚರಿಕೆ ಸಂದೇಶವನ್ನು ರವಾನಿಸಲಾಗಿದೆ.

<><><>

ಬಿಹಾರ, ಪಶ್ಚಿಮ ಬಂಗಾಳ ಹಾಗೂ ಸಿಕ್ಕಿಂನ ಕೆಲವು ಭಾಗಗಳಲ್ಲಿ ಬಿರುಗಾಳಿಯೊಂದಿಗೆ ಮಿಂಚು-ಗುಡುಗಿನ ಸಹಿತ ಸಾಧಾರಣ ಮಳೆಯಾಗುವ ಸಾಧ್ಯತೆಯಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಈಶಾನ್ಯ ಭಾರತದಲ್ಲಿ ಮತ್ತು ವಿದರ್ಭ ಪ್ರದೇಶದಲ್ಲಿ ಕನಿಷ್ಠ ಉಷ್ಣಾಂಶ ಮುಂದಿನ ಎರಡು-ಮೂರು ದಿನಗಳ ಕಾಲ ೨ ರಿಂದ ೩ ಡಿಗ್ರಿ ಸೆಲ್ಸಿಯೆಸ್ ಹೆಚ್ಚಾಗಲಿದೆ ಎಂದು ಐಎಂಡಿ ಹೇಳಿದೆ.

<><><>

ಕೇಂದ್ರ ಯುವಜನ ವ್ಯವಹಾರ ಮತ್ತು ಕ್ರೀಡಾ ಸಚಿವ ಡಾ. ಮನ್ಸುಖ್ ಮಾಂಡವೀಯ ದೆಹಲಿಯಲ್ಲಿ ಇದೇ ೨೦ರಿಂದ ೨೭ರವರೆಗೆ ಖೇಲೋ ಇಂಡಿಯಾ ಪ್ಯಾರಾ ಕ್ರೀಡಾಕೂಟ ನಡೆಯಲಿದೆ ಎಂದು ಪ್ರಕಟಿಸಿದ್ದಾರೆ. ಈ ಕ್ರೀಡಾಕೂಟದಲ್ಲಿ ಹಲವು ಪ್ರಮುಖ ಕ್ರೀಡಾಪಟುಗಳು ಭಾಗವಹಿಸಲಿದ್ದಾರೆ. ಇದು ಖೇಲೋ ಇಂಡಿಯಾ ಪ್ಯಾರಾ ಕ್ರೀಡಾಕೂಟದ ೨ನೇ ಆವೃತ್ತಿಯಾಗಿರಲಿದೆ. ೬ ವಿಭಾಗಗಳಲ್ಲಿ ಸುಮಾರು ೧ ಸಾವಿರದ ೨೩೦ಕ್ಕೂ ಅಧಿಕ ಪ್ಯಾರಾ ಅಥ್ಲಿಟ್‌ಗಳು ಪದಕಗಳಿಗಾಗಿ ಸೆಣಸಲಿದ್ದಾರೆ. ದೆಹಲಿಯ ಜವಹಾರ್‌ಲಾಲ್ ನೆಹರು ಕ್ರೀಡಾಂಗಣದಲ್ಲಿ ಪ್ಯಾರಾ ಅಥ್ಲಿಟಿಕ್ಸ್, ಪ್ಯಾರಾ ಆರ್ಚರಿ ಮತ್ತು ಪ್ಯಾರಾ ಪವರ್ ಲಿಫ್ಟಿಂಗ್ ಕ್ರೀಡೆಗಳು ನಡೆಯಲಿವೆ.

<><><>

ಇಂಡಿಯನ್ ಸೂಪರ್ ಲೀಗ್ - ಐಎಸ್‌ಎಲ್ ಫುಟ್ಬಾಲ್ ಪಂದ್ಯದಲ್ಲಿ ಇಂದು ಹೈದರಾಬಾದ್ ಫುಟ್ಬಾಲ್ ಕ್ಲಬ್ ಮತ್ತು ಪಂಜಾಬ್ ಫುಟ್ಬಾಲ್ ಕ್ಲಬ್ ತಂಡಗಳ ಮುಖಾಮುಖಿಯಾಗಲಿವೆ. ಹೈದರಾಬಾದ್‌ನ ಗಚಿಬೌಲ್ಲಿ ಕ್ರೀಡಾಂಗಣದಲ್ಲಿ ಇಂದು ಸಂಜೆ ೭.೩೦ಕ್ಕೆ ಪಂದ್ಯವು ಆರಂಭವಾಗಲಿದೆ. ಕಳೆದ ರಾತ್ರಿ ನಡೆದ ಪಂದ್ಯದಲ್ಲಿ ಒಡಿಶಾ ಫುಟ್ಬಾಲ್ ಕ್ಲಬ್ ತಂಡವು, ಜೆಮ್‌ಶೆಡ್‌ಪುರ ಫುಟ್ಬಾಲ್ ಕ್ಲಬ್ ತಂಡವನ್ನು ೩-೨ ಗೋಲುಗಳಿಂದ ಸೋಲಿಸಿತು.

<><><>

ಇದೇ ಭಾನುವಾರ ದುಬೈ ಅಂತಾರಾಷ್ಟ್ರೀಯ ಕ್ರೀಡಾಂಗಣದಲ್ಲಿ ಐಸಿಸಿ ಚಾಂಪಿಯನ್ಸ್ ಟ್ರೋಫಿ ಕ್ರಿಕೆಟ್ - ೨೦೨೫ರ ಫೈನಲ್ ಪಂದ್ಯ ನಡೆಯಲಿದೆ. ಎಲ್ಲ ಪಂದ್ಯಗಳಲ್ಲೂ ಗೆಲುವು ಸಾಧಿಸಿ ಉತ್ತಮ ಪ್ರದರ್ಶನ ತೋರಿರುವ ಭಾರತ ತಂಡ ಪ್ರಶಸ್ತಿಗಾಗಿ ನ್ಯೂಜಿಲೆಂಡ್ ತಂಡದ ಎದುರು ಸೆಣಸಲಿದೆ. ಟೂರ್ನಿಯಲ್ಲಿ ನಿನ್ನೆ ರಾತ್ರಿ ಲಾಹೋರ್‌ನ ಗಡಾಫಿ ಕ್ರೀಡಾಂಗಣದಲ್ಲಿ ನಡೆದ ೨ನೇ ಸೆಮಿಫೈನಲ್ ಪಂದ್ಯದಲ್ಲಿ ನ್ಯೂಜಿಲೆಂಡ್ ತಂಡವು ದಕ್ಷಿಣ ಆಫ್ರಿಕಾ ತಂಡವನ್ನು ೫೦ ರನ್‌ಗಳಿಂದ ಸೋಲಿಸಿ ಫೈನಲ್ ಪ್ರವೇಶಿಸಿತು.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>